# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಶ್ರೀ ಕೆ. ಸಣ್ಣವೀರಪ್ಪ, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ ತಾಲ್ಲೂಕು ಪಂಚಾಯತಿ, ಕೂಡ್ಲಿಗಿ ಇವರ ವಿರುದ್ಧದ ವಿರುದ್ಧದ ಶಿಸ್ತು ಕ್ರಮ- ಅಂತಿಮ ಆದೇಶ.

ಓದಲಾಗಿದೆ:1. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಬಳ್ಳಾರಿ ಇವರ ಪತ್ರ ಸಂಖ್ಯೆ: ಜಿಪಂಬ/ಸಿಬ್ಬಂದಿ(4)/ಸಿಸಿಎ/37/2011-12 ದಿನಾಂಕ: 03-09-2012.
2. ಕಾರಣ ಕೇಳುವ ನೋಟೀಸ್ ದಿನಾಂಕ:29-12-2012.
3. ಶ್ರೀ ಕೆ. ಸಣ್ಣವೀರಪ್ಪ,ರವರ ಲಿಖಿತ ಹೇಳಿಕೆಗಳು, ದಿ:24-01-2013.
4. ಸರ್ಕಾರದ ಆದೇಶದ ಸಂಖ್ಯೆ: ಗ್ರಾಅಪ 68 ವಿಸೇಬಿ 2012. ದಿನಾಂಕ 09-04-2013.
5. ವಿಚಾರಣಾಧಿಕಾರಿಯವರ ವರದಿ ದಿನಾಂಕ:05-01-2015.
6. ಎರಡನೇ ಕಾರಣ ಕೇಳುವ ನೋಟೀಸ್ ದಿನಾಂಕ:09-04-2015.
7. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಬಳ್ಳಾರಿ ಇವರ ಪತ್ರ ಸಂಖ್ಯೆ: ಜಿಪಂಬ/ಸಿಬ್ಬಂದಿ(4)/ಸಿಸಿಎ/28/2014-15 ದಿನಾಂಕ:04-09-2015.

------

## ಪ್ರಸ್ತಾವನೆ:-

ಶ್ರೀ ಕೆ. ಸಣ್ಣವೀರಪ್ಪ, ಇವರು ಈ ಹಿಂದೆ, ಕಾರ್ಯನಿರ್ವಾಹಕ ಅಧಿಕಾರಿ ತಾಲ್ಲೂಕು ಪಂಚಾಯತಿ, ಕೂಡ್ಲಿಗಿ ಇಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದ ಅವಧಿಯಲ್ಲಿ ಕೂಡ್ಲಿಗಿ ತಾಲೂಕಿನ ರಾಮದುರ್ಗ ಗ್ರಾಮ ಪಂಚಾಯತಿಯ ಪ್ರಭಾರೆ ಕಾರ್ಯದರ್ಶಿಯಾದ ಶ್ರೀ ಟಿ. ತಿಮ್ಮಪ್ಪ ಇವರು, ಈ ಗ್ರಾಮ ಪಂಚಾಯತಿಗೆ ನೂತನವಾಗಿ ಸ್ಥಳ ನಿಯುಕ್ತಿಗೊಂಡ ಪಂಚಾಯತಿ ಅಭಿವೃದ್ಧಿ ಅಧಿಕಾರಿಗೆ ಗ್ರಾಮ ಪಂಚಾಯತಿಯ ದಾಖಲಾತಿಗಳನ್ನು ನೀಡಿರುವುದಿಲ್ಲ. ಆದ್ದರಿಂದ ಶ್ರೀ ಟಿ. ತಿಮ್ಮಪ್ಪ ಇವರು ಪಂಚಾಯತಿ ಅಭಿವೃದ್ಧಿ ಅಧಿಕಾರಿ,ಇವರಿಗೆ ನೀಡಬೇಕಾದ ದಾಖಲಾತಿಗಳ ಪಟ್ಟಿಯನ್ನು ಸಲ್ಲಿಸುವಂತೆ ಇವರಿಗೆ ಸೂಚಿಸಿದ್ದರೂ ಈ ಬಗ್ಗೆ ಯಾವುದೇ ಕ್ರಮ ವಹಿಸದೇ ನಿರ್ಲಕ್ಷಿಸಿ ಮೇಲಾಧಿಕಾರಿಗಳ ಆದೇಶ ಪಾಲಿಸದೇ ಕರ್ತವ್ಯಲೋಪ ವೆಸಗಿರುವುದು ಮತ್ತು 2009-2010ನೇ ಸಾಲಿನ ಮಹಾತ್ಮಾ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯಡಿ ಕೂಡ್ಲಿಗಿ ತಾಲೂಕಿನ ದೂಪದಹಳ್ಳಿ ಮತ್ತು ಕಂದಗಲ್ಲು ಗ್ರಾಮ ಪಂಚಾಯತಿಯಲ್ಲಿ ಹಣ ದುರುಪಯೋಗವಾದ ಹಿನ್ನೆಲೆಯಲ್ಲಿ ಈ ಪ್ರಕರಣದಲ್ಲಿ ಭಾಗಿಯಾದ ನೌಕರರ ವಿರುದ್ಧ ಕ್ರಿಮಿನಲ್ ಮೊಕದ್ದಮೆ ದಾಖಲಿಸಲು ಸೂಚಿಸಿದ್ದರೂ ಈ ಕುರಿತು ಅನಗತ್ಯ ಪತ್ರ ವ್ಯವಹಾರ ಮಾಡಿ ಕ್ರಿಮಿನಲ್ ಮೊಕದ್ದಮೆ ದಾಖಲಿಸದೇ ಮೇಲಾಧಿಕಾರಿಗಳ ನಿರ್ದೇಶನವನ್ನು ನಿರ್ಲಕ್ಷಿಸಿರುವುದು ಹಾಗೂ ಕೂಡ್ಲಿಗಿ ತಾಲೂಕಿನ ಹಾರಕಭಾವಿ ಗ್ರಾಮ ಪಂಚಾಯತಿಯಲ್ಲಿ 2005-2006 ರಿಂದ 2009-2010ನೇ ಸಾಲಿನವರೆಗೆ ವಿವಿಧ ವಸತಿ ಯೋಜನೆಯಡಿ ಆಗಿರುವ ಅವ್ಯವಹಾರದ ಹಿನ್ನೆಲೆಯಲ್ಲಿ ಸದರಿ ಅವಧಿಯಲ್ಲಿ ಕಾರ್ಯನಿರ್ವಹಿಸಿದ ಕಾರ್ಯದರ್ಶಿಗಳ ವಿರುದ್ಧ ಸ್ಥಳೀಯ ಪೋಲೀಸ್ ಠಾಣೆಯಲ್ಲಿ ಕ್ರಿಮಿನಲ್ ಮೊಕದ್ದಮೆಯನ್ನು ದಾಖಲಿಸುವಂತೆ ಸೂಚಿಸಿದ್ದರೂ, ಈ ನಿಟ್ಟಿನಲ್ಲಿ ಕ್ರಿಮಿನಲ್ ಮೊಕದ್ದಮೆ ದಾಖಲಿಸದೇ ಮೇಲಾಧಿಕಾರಿಗಳ ನಿರ್ದೇಶನವನ್ನು ನಿರ್ಲಕ್ಷಿಸಿ ಆರೋಪಿತ ನೌಕರರನ್ನು ರಕ್ಷಣೆ ಮಾಡುವ ಕಾರ್ಯದಲ್ಲಿ ತೊಡಗಿ ಕರ್ತವ್ಯ ಲೋಪ ಎಸಗಿರುವ ಆರೋಪದ ಮೇಲೆ ಶಿಸ್ತು ಕ್ರಮ ಜರುಗಿಸಲು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಬಳ್ಳಾರಿ

GO

ರವರು ಮೇಲೆ ಕ್ರಮ ಸಂಖ್ಯೆ (1) ರಲ್ಲಿ ಓದಲಾದ ದಿನಾಂಕ:03-09-2012ರ ಪತ್ರದಲ್ಲಿ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ಪ್ರಸ್ತಾವನೆಯನ್ನು ಪರಿಶೀಲಿಸಿ, ಶ್ರೀ ಕೆ. ಸಣ್ಣವೀರಪ್ಪ, ಇವರಿಗೆ ಮೇಲೆ ಕ್ರಮ ಸಂಖ್ಯೆ (2) ರಲ್ಲಿ ಓದಲಾದ ದಿನಾಂಕ:29-12-2012 ರ ಕಾರಣ ಕೇಳುವ ನೋಟೀಸಿನೊಂದಿಗೆ ದೋಷಾರೋಪಣಾ ಪಟ್ಟಿಯನ್ನು ಜಾರಿ ಮಾಡಲಾಗಿತ್ತು. ಈ ಅಧಿಕಾರಿ, ಕಾರಣ ಕೇಳುವ ನೋಟೀಸಿಗೆ ಪ್ರತಿಯಾಗಿ ಮೇಲೆ ಓದಲಾದ ಕ್ರಮ ಸಂಖ್ಯೆ(3) ರಲ್ಲಿ ಲಿಖಿತ ಹೇಳಿಕೆಯನ್ನು ಸಲ್ಲಿಸಿ ಅವರ ವಿರುದ್ಧ ಮಾಡಿರುವ ಆರೋಪಗಳನ್ನು ನಿರಾಕರಿಸಿರುವುದರಿಂದ, ಶ್ರೀ ಕೆ. ಸಣ್ಣವೀರಪ್ಪ, ಇವರ ವಿರುದ್ಧದ ಆರೋಪಗಳ ಸತ್ಯಾಸತ್ಯತೆಯನ್ನು ತಿಳಿಯಲು ವಿವರವಾದ ಇಲಾಖಾ ವಿಚಾರಣೆಯನ್ನು ಕರ್ನಾಟಕ ನಾಗರೀಕ ಸೇವಾ (ವನಿಮೆ) ನಿಯಮಾವಳಿ 1957ರ ನಿಯಮ 11ರ ಅನ್ವಯ ವಿಧಿ ವಿಧಾನದನ್ವಯ ನಡೆಸಲು ಸರ್ಕಾರವು ತೀರ್ಮಾನಿಸಿ, ಮೇಲೆ ಕ್ರಮ ಸಂಖ್ಯೆ (4) ರಲ್ಲಿ ಓದಲಾದ ದಿ:09-04-2013ರ ಆದೇಶದಲ್ಲಿ ಶ್ರೀ ಡಿ.ವಿ. ಶೇಠ, ನಿವೃತ್ತ ನ್ಯಾಯಾಧೀಶರು, ಧಾರವಾಡ, ಇವರನ್ನು ವಿಚಾರಣಾಧಿಕಾರಿಯನ್ನಾಗಿ ನೇಮಿಸಲಾಗಿತ್ತು.

ವಿಚಾರಣಾಧಿಕಾರಿಯವರು ಮೇಲೆ ಕ್ರಮ ಸಂಖ್ಯೆ (5) ರಲ್ಲಿ ಓದಲಾದ ದಿನಾಂಕ 05-01-2015 ರಂದು ಸರ್ಕಾರಕ್ಕೆ ವಿಚಾರಣಾ ವರದಿಯನ್ನು ಸಲ್ಲಿಸಿ, ಆಪಾದಿತರ ವಿರುದ್ಧ ಮಾಡಿರುವ ಆರೋಪಗಳು ಸಾಬೀತಾಗಿರುವುದಿಲ್ಲವೆಂದು ಅಭಿಪ್ರಾಯ ಪಟ್ಟಿದ್ದಾರೆ.

ಆದರೆ, ಸರ್ಕಾರವು ವಿಚಾರಣಾದಿಕಾರಿಯವರ ನಿರ್ಣಯವನ್ನು ಒಪ್ಪದೆ ಪ್ರಕರಣವನ್ನು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ, ಮೇಲ್ಮನವಿ) ನಿಯಮ 1957ರ ನಿಯಮ 11(ಎ) ರಡಿಯಲ್ಲಿ ಕೂಲಂಕಷವಾಗಿ ಪರಿಶೀಲಿಸಿ, ಮೇಲೆ ಕ್ರಮ ಸಂಖ್ಯೆ (6) ರಲ್ಲಿ ಓದಲಾದ ದಿನಾಂಕ 09-04-2015 ರಂದು ವಿಚಾರಣಾ ವರದಿಯ ಪ್ರತಿಯೊಂದಿಗೆ ದಿನಾಂಕ: 09-04-2015ರಂದು ಎರಡನೇ ಕಾರಣ ಕೇಳುವ ನೋಟೀಸ್‌ಅನ್ನು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಬಳ್ಳಾರಿ ಇವರ ಮುಖಾಂತರ ಶ್ರೀ ಕೆ. ಸಣ್ಣವೀರಪ್ಪ ಇವರಿಗೆ ಜಾರಿಮಾಡಲು ಕಳುಹಿಸಲಾಗಿತ್ತು.

ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಬಳ್ಳಾರಿ ಇವರು ಮೇಲೆ ಕ್ರಮ ಸಂಖ್ಯೆ (7) ರಲ್ಲಿ ಓದಲಾದ ದಿ:04-09-2015 ರಂದು ಸರ್ಕಾರಕ್ಕೆ ಸಲ್ಲಿಸಿರುವ ವರದಿಯಲ್ಲಿ, ಶ್ರೀ ಕೆ. ಸಣ್ಣವೀರಪ್ಪ ಇವರು ದಿ:22-05-2015ರಂದು ನಿಧನ ಹೊಂದಿರುವುದರಿಂದ ಎರಡನೇ ಕಾರಣ ಕೇಳುವ ನೋಟೀಸ್‌ಅನ್ನು ಜಾರಿಗೊಳಿಸಿರುವುದಿಲ್ಲವೆಂದು ತಿಳಿಸಿರುತ್ತಾರೆ.

ಪ್ರಸ್ತುತ ಪ್ರಕರಣದಲ್ಲಿ ಶ್ರೀ ಕೆ. ಸಣ್ಣವೀರಪ್ಪ ಹಿಂದಿನ ಕಾರ್ಯನಿರ್ವಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ಕೂಡ್ಲಿಗಿ, ಇವರ ವಿರುದ್ಧದ ಆರೋಪಗಳಲ್ಲಿ ಯಾವುದೇ ಆರ್ಥಿಕ ನಷ್ಟದ ಪ್ರಸ್ತಾವನೆ ಇರುವುದಿಲ್ಲ. ಶ್ರೀ ಕೆ. ಸಣ್ಣವೀರಪ್ಪ ಇವರು ದಿನಾಂಕ: 22-05-2015ರಂದು ನಿಧನ ಹೊಂದಿರುವುದರಿಂದ ಇಲಾಖಾ ವಿಚಾರಣೆ ಪ್ರಕರಣದಲ್ಲಿ ಭಾಗಿಯಾದ ಅಪಾದಿತ ಸರ್ಕಾರಿ ನೌಕರರು ಮರಣ ಹೊಂದಿದ ಸಂದರ್ಭದಲ್ಲಿ ಇಲಾಖಾ ವಿಚಾರಣೆ ಪ್ರಕ್ರಿಯೆಯು ಆ ಹಂತಕ್ಕೆ ಸಮಾಪ್ತಿಯಾಗುತ್ತದೆ. ಪ್ರಸ್ತುತ ಪ್ರಕರಣದಲ್ಲಿ ಆರೋಪಿತರ ವಿರುದ್ಧ ಯಾವುದೇ ಆರ್ಥಿಕ ನಷ್ಟದ ಪ್ರಸ್ತಾವನೆ ಇರುವುದಿಲ್ಲವಾದರಿಂದ ಶ್ರೀ ಕೆ. ಸಣ್ಣವೀರಪ್ಪ, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ಕೂಡ್ಲಿಗಿ,

..3.

ಇವರ ವಿರುದ್ಧದ ಇಲಾಖಾ ವಿಚಾರಣೆಯನ್ನು ಕೈಬಿಡಲು ಸರ್ಕಾರವು-ನಿರ್ಧರಿಸಿ ಈ ಕೆಳಕಂಡಂತೆ ಆದೇಶಿಸಿದೆ.

<u>ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 68 ವಿಸೇಬಿ 2012 ದಿನಾಂಕ: 10-12-2015.</u>

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳಿಂದ, ಸರ್ಕಾರವು ಶ್ರೀ ಕೆ. ಸಣ್ಣವೀರಪ್ಪ, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ ತಾ.ಪಂ., ಕೂಡ್ಲಿಗಿ, ಬಳ್ಳಾರಿ, ಜಿಲ್ಲೆ (ಪ್ರಸ್ತುತ ನಿಧನ) ಇವರಿಗೆ ದಿನಾಂಕ:29-12-2012ರ ನೋಟೀಸಿನ ಜೊತೆ ಜಾರಿ ಮಾಡಿದ್ದ ಆರೋಪಗಳ ಬಗೆಗಿನ ಇಲಾಖಾ ವಿಚಾರಣೆಯನ್ನು ಸಮಾಪ್ತಿಗೊಳಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ವಿ. ಹನುಮಂತಯ್ಯ)
ಸರ್ಕಾರದ ಅಧೀನ ಕಾರ್ಯದರ್ಶಿ(ಸೇ-ಬಿ & ಸಿ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

ಗೆ:

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಯೋಜನೆ ಕಾರ್ಯಕ್ರಮ ಸಂಯೋಜನೆ, ಮತ್ತು ಸಾಂಖ್ಯಿಕ ಇಲಾಖೆ, ಬಹುಮಹಡಿ ಕಟ್ಟಡ,ಬೆಂಗಳೂರು
3. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಬಳ್ಳಾರಿ.
4. ಸರ್ಕಾರದ ಅಧೀನ ಕಾರ್ಯದರ್ಶಿ,ಯೋಜನೆ ಕಾರ್ಯಕ್ರಮ ಸಂಯೋಜನೆ, ಮತ್ತು ಸಾಂಖ್ಯಿಕ ಇಲಾಖೆ(ಎಸ್-5), ಬಹುಮಹಡಿ ಕಟ್ಟಡ,ಬೆಂಗಳೂರು.
5. ಸಂಬಂದಿಸಿದ ಅಧಿಕಾರಿಗೆ.(ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಬಳ್ಳಾರಿ. ಇವರ ಮುಖಾಂತರ).

<u>ಪ್ರತಿಯನ್ನು ಮಾಹಿತಿಗಾಗಿ:-</u>

1) ಸರ್ಕಾರದ ಪ್ರಧಾನ ಕಾರ್ಯದರ್ಶಿ/ ಪ್ರಧಾನ ಕಾರ್ಯದರ್ಶಿ(ಪಂ.ರಾಜ್)/ ಉಪ ಕಾರ್ಯದರ್ಶಿ (ಆಡಳಿತ), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಇವರ ಆಪ್ತ ಶಾಖೆಗೆ.
2) ವಿಶೇಷಾಧಿಕಾರಿ, ಗಣಕ ಕೋಶ, ಗ್ರಾ.ಅ.ಪಂ.ರಾಜ್ ಇಲಾಖೆ.
3) ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.